CC No.3064/2025
CW-1 PW-1

**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ. 3064/2025**

**ಹೆಸರು** :- **ಜಗದೀಶ ಗೌಡ**

**ತಂದೆಯ ಹೆಸರು** :- **ಬಂಗಾರಪ್ಪ ಗೌಡ**

**ವಯಸ್ಸು** :- **49 ವರ್ಷ**

**ಉದ್ಯೋಗ** :- **ವ್ಯವಸಾಯ**

**ಸ್ಥಳ** :- **ನೆಲ್ಲಿಕೊಪ್ಪ**

**ದಿನಾಂಕಃ 03.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಆರೋಪಿ ಮತ್ತು ನಮ್ಮ ನಡುವೆ ಯಾವುದೇ ಗಲಾಟೆ ಆಗಿರುವುದಿಲ್ಲ. ನಾನು ಪೋಲಿಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗಳಿಗೆ ಸಹಿ ಹಾಕಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1ಎ ಎಂದು ಗುರುತಿಸಲಾಯಿತು. ಸಾಕ್ಷಿಯು ಘಟನಾ ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-2 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಎ ಮತ್ತು ಬಿ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರಗಳ ಬಗ್ಗೆ ನನಗೆ ಗೊತ್ತಿಲ್ಲ. ಸಾಕ್ಷಿಗೆ ಎರಡು ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು, ಅವುಗಳಲ್ಲಿ ತಮ್ಮ

ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–3 ಮತ್ತು 4 ಎಂದು ಗುರುತಿಸಲಾಯಿತು. ಅವುಗಳನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರ ಮುಂದೆ ಯಾವುದೇ ಮುಂದುವರೆದ ಹೇಳಿಕೆಯನ್ನು ನೀಡಿರುವುದಿಲ್ಲ.

(**ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು**).

**ಪಾಟಿ ಸವಾಲುಃ ಮಾನ್ಯ ಸ.ಸ.ಅಭಿಯೋಜಕವರಿಂದಃ**

ಸೊರಬ ತಾಲ್ಲೂಕಿನ ಸೂರಗಣಿ ಗ್ರಾಮದ ಸ.ನಂ.93/1 ರಲ್ಲಿ ನನಗೆ ಸುಮಾರು 6 ಎಕರೆ 20 ಗುಂಟೆ ಜಮೀನು ಇದ್ದು, ಸದರಿ ಜಮೀನು ನನ್ನ ಹಾಗೂ ನನ್ನ ಸಹೋದರರ ಜಂಟಿ ಖಾತೆ ಇದ್ದು, ನಾವು ಸುಮಾರು 25 ವರ್ಷಗಳಿಂದ ಜಮೀನಿನಲ್ಲಿ ಉಳುಮೆ ಮಾಡುತ್ತಾ ಬಂದಿರುತ್ತೇವೆ. ದಿಃ 17.06.2025 ರಂದು ನಮ್ಮ ಜಮೀನಿನಲ್ಲಿದ್ದ ಬದುವನ್ನು ಶಿರಸಿ ತಾಲ್ಲೂಕು ಸಂತೋಳ್ಳಿ ಗ್ರಾಮದ ವಾಸಿಯಾದ ಆರೋಪಿತರು ನಮ್ಮ ಜಮೀನಿಗೆ ಮಧ್ಯಂತರ ಆದೇಶ ಇದ್ದರೂ ಸಹ ಜೆ.ಸಿ.ಬಿ.ಯಿಂದ ಸದರಿ ಬದುವನ್ನು ಹೊಡೆದು ಹಾಳುಮಾಡಿರುತ್ತಾರೆ. ಸದರಿ ಒಡೆದ ಬದುವನ್ನು ಸರಿಮಾಡಲೆಂದು ದಿಃ18.06.2025 ರಂದು ಬೆಳಗ್ಗೆ 10.30 ಗಂಟೆ ಸಮಯಕ್ಕೆ ಜಮೀನಿಗೆ ಹೋದಾಗ ಆರೋಪಿತರು ಏಕಾಏಕಿ ಅತಿಕ್ರಮ ಪ್ರವೇಶ ಮಾಡಿ 1 ನೇ ಆರೋಪಿತನು ದೊಣ್ಣೆಯಿಂದ

ಮೈಕೈಗೆ ಎದೆಗೆ ಹೊಡೆದಿರುತ್ತಾನೆ ಅಂದರೆ ಸರಿಯಲ್ಲ. 2 ಮತ್ತು 3 ನೇ ಆರೋಪಿತರು ನನ್ನನ್ನು ಹಿಡಿದು ಎಳದಾಡಿ ಕೈಗಳನ್ನು ತಿರುವಿರುತ್ತಾರೆ ಅಂದರೆ ಸರಿಯಲ್ಲ. 4 ನೇ ಆರೋಪಿತಳು ಚಾಸಾ–2 ರವರಿಗೆ ಕೈಗಳಿಂದ ಹೊಡೆದು ಸೀರೆಯನ್ನು ಹಿಡಿದು ಎಳೆದು ಹರಿದಿರುತ್ತಾರೆ ಅಂದರೆ ಸರಿಯಲ್ಲ. ಆಗ ಪಕ್ಕದ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಚಾಸಾ–3 ಮತ್ತು 4 ರವರು ಜಗಳಚನ್ನು ಬಿಡಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರು ಸ್ಥಳದಿಂದ ಹೋಗುವಾಗ ಜೀವಬೆದರಿಕೆ ಹಾಕಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರ ಹಲ್ಲೆಯಿಂದ ನಾನು ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಅಂದರೆ ಸರಿಯಲ್ಲ. ದಿಃ18.06.2025 ರಂದು ನಿಪಿ–1 ರಂತೆ ಆರೋಪಿತರ ವಿರುದ್ಧ ದೂರು ಸಲ್ಲಿಸಿರುತ್ತೇನೆ ಅಂದರೆ ಸರಿಯಲ್ಲ. ದಿಃ 20.06.2025 ರಂದು ನಾನು ತೋರಿಸಿದ ಘಟನಾ ಸ್ಥಳದಲ್ಲಿ ನಿಪಿ–2 ರಂತೆ ಸ್ಥಳ ಪಂಚನಾಮೆಯನ್ನು ಜರುಗಿಸಿ, ನಿಪಿ–3 ಮತ್ತು 4 ರಂತೆ ಭಾವಚಿತ್ರಗಳನ್ನು ತೆಗೆದಿರುತ್ತಾರೆ ಅಂದರೆ ಸರಿಯಲ್ಲ. ದಿಃ 18.06.2025 ರಂದು ಈಗ ಓದಿ ಹೇಳಿದಂತೆ ಮುಂದುವರೆದ ಹೇಳಿಕೆಯನ್ನು ನೀಡಿರುತ್ತೇನೆ ಅಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ–5 ಎಂದು ಗುರುತಿಸಲಾಯಿತು. ಈ ದಿನ ನಾನು ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿರುತ್ತೇನೆ ಅಂದರೆ ಸರಿ. ಆ ಕಾರಣ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟಿ ಸವಾಲುಃ** ಆರೋಪಿ ಪರ ವಕೀಲರು ಸಾಕ್ಷಿಯ ಪಾಟಿ ಸವಾಲು ಇಲ್ಲ ಎಂದು ನುಡಿದಿದ್ದು, ಸಾಕ್ಷಿಯ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಸಿ/ಸಿ 1 ನೇ ಹೆಚ್ಚುವರಿ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**